ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: [illegible] ದಿನಾಂಕ : DATE : 23/3/2021

## ವಿಧಾನಸಭೆಯಲ್ಲಿ ಪ್ರತಿಪಕ್ಷ ಧರಣಿ-ಮಾತಿನ ಚಕಮಕಿ

# ಎಸ್ಐಟಿ ಬದಲು ಹೈಕೋರ್ಟ್ ಸಿಜೆ ಉಸ್ತುವಾರಿ ತನಿಖೆಗೆ ಪಟ್ಟು

ವಿಧಾನಸಭೆ: ಮಾಜಿ ಸಚಿವ ರಮೇಶ್ ಜಾರಕಿಹೊಳಿ ವಿರುದ್ಧದ ರಾಸಲೀಲೆ ಸಿಡಿ ಹಗರಣದ ತನಿಖೆಯನ್ನು ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳ ಮೇಲ್ವಿಚಾರಣೆಯಲ್ಲೇ ನಡೆಸಬೇಕೆಂದು ಪ್ರತಿಪಕ್ಷ ಕಾಂಗ್ರೆಸ್ ಸೋಮವಾರ ವಿಧಾನಸಭೆಯಲ್ಲಿ ಪಟ್ಟು ಹಿಡಿಯುವ ಮೂಲಕ ಆಡಳಿತಾರೂಢ ಬಿಜೆಪಿ ಸರ್ಕಾರವನ್ನು ತೀವ್ರ ಪೇಚಿಗೆ ಸಿಲುಕಿಸಿತು. ಅಷ್ಟೇ ಅಲ್ಲ, ಸಂತ್ರಸ್ತೆ ವಿಡಿಯೋ ಹೇಳಿಕೆ ಆಧರಿಸಿ ಮಾಜಿ ಸಚಿವರ ವಿರುದ್ಧ ಅತ್ಯಾಚಾರ ಪ್ರಕರಣ ದಾಖಲಿಸಬೇಕು ಹಾಗೂ ನ್ಯಾಯಾಲಯದಿಂದ ತಡೆಯಾಜ್ಞೆ ತಂದಿರುವ ಆರು ಮಂದಿ ಸಚಿವರು ರಾಜೀನಾಮೆ ನೀಡಬೇಕೆಂದು ಆಗ್ರಹಿಸಿ ದಿನದ ಅಂತ್ಯಕ್ಕೆ ಧರಣಿ ನಡೆಸಿತು.

ನಿಯಮ 69ರಡಿ ಭೋಜನ ವಿರಾಮದ ನಂತರ ಜರುಗಿದ ಸರಿಸುಮಾರು ನಾಲ್ಕು ಗಂಟೆಗಳ ಸುದೀರ್ಘ ಚರ್ಚೆಗೆ ಸರ್ಕಾರದ ಪರವಾಗಿ ಉತ್ತರ ನೀಡಿದ ಗೃಹ ಸಚಿವ ಬಸವರಾಜ ಬೊಮ್ಮಾಯಿ, ಪ್ರಕರಣದ ನಿಷ್ಪಕ್ಷಪಾತ ತನಿಖೆಗೆ ಈಗಾಗಲೇ ಎಸ್ಐಟಿ ರಚಿಸಲಾಗಿದೆ. ತನಿಖೆಯಲ್ಲಿ ಸಾಕಷ್ಟು ಪ್ರಗತಿ ಸಾಧಿಸಲಾಗಿದ್ದು, ಶೀಘ್ರದಲ್ಲೇ ಸಂತ್ರಸ್ತೆಯನ್ನು ಪತ್ತೆ ಮಾಡಿ ಆಕೆಯ ಹೇಳಿಕೆಯನ್ನು ದಾಖಲಿಸುತ್ತೇವೆ. ಹೀಗಾಗಿ ಎಸ್ಐಟಿ ತನಿಖೆಯಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ. ಆರು ಮಂದಿ ಸಚಿವರು ತಮ್ಮ ಸಂವಿಧಾನಬದ್ಧ ಹಕ್ಕು ಚಲಾಯಿಸಿ ನ್ಯಾಯಾಲಯದಿಂದ ತಡೆಯಾಜ್ಞೆ ತಂದಿರುವುದು ರಾಜೀನಾಮೆ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ ಎಂದು ತಳ್ಳಿ ಹಾಕಿದರು.


ರಾಸಲೀಲೆ ಹಗರಣ

- ಜಾರಕಿಹೊಳಿ ವಿರುದ್ಧ ಅತ್ಯಾಚಾರ ಪ್ರಕರಣಕ್ಕೆ ಆಗ್ರಹ
- ಸಂತ್ರಸ್ತೆ ಪರ ಎಫ್ಐಆರ್ ದಾಖಲಿಸಲು ಒತ್ತಾಯ
- ಸದನದಲ್ಲಿ ಧರಣಿ ಆರಂಭಿಸಿದ ಕಾಂಗ್ರೆಸ್
- ಎಸ್ಐಟಿ ತನಿಖೆ ಸಾಕೆಂದ ಸರ್ಕಾರ

ಸಿಡಿ ಪ್ರಕರಣದಲ್ಲಿ ನೈತಿಕತೆ ಮತ್ತು ಅಪರಾಧಿಕ ಕೃತ್ಯ ಎರಡೂ ವಿಚಾರಗಳನ್ನು ಒಳಗೊಂಡಿದೆ. ಹೀಗಾಗಿ ನೈತಿಕತೆ ಬಗೆಗೆ ನಾನು ಚರ್ಚಿಸಲು ಹೋಗುವುದಿಲ್ಲ. ನೈತಿಕತೆ ವಿಚಾರವಾಗಿಯೇ ಈಗಾಗಲೇ ರಮೇಶ್ ಜಾರಕಿಹೊಳಿ ರಾಜೀನಾಮೆ ಕೊಟ್ಟಿದ್ದಾರೆ. ಹೀಗಾಗಿ ಅಪರಾಧಿಕ ಕೃತ್ಯ ನಡೆದಿರುವ ಬಗೆಗೆ ಮಾತ್ರ ಸ್ಪಷ್ಟನೆ ಕೊಡುತ್ತೇನೆ. ಮಾಜಿ ಸಚಿವರ ವಿರುದ್ಧ ದಿನೇಶ್ ಕಲ್ಲಹಳ್ಳಿ ಎಂಬುವವರು ದೂರು ನೀಡಿದ್ದರು. ಆದರೆ ಅವರು ಮೂರನೇ ವ್ಯಕ್ತಿ. ಯಾವ ಮಹಿಳೆಗೆ ಅನ್ಯಾಯವಾಗಿದೆ ಎಂದು ಹೇಳಲಾಗುತ್ತಿದೆಯೋ ಅವರು ದೂರ ನೀಡಿಲ್ಲ ಅಥವಾ ಅವರ ಸಂಬಂಧಿಗಳೂ ಕೂಡ ದೂರು ನೀಡಿಲ್ಲ. ಲಲಿತಕುಮಾರಿ ಪ್ರಕರಣದಲ್ಲಿ 2013ರಲ್ಲಿ ಸುಪ್ರಿಂಕೋರ್ಟ್ ನೀಡಿರುವ ತೀರ್ಪಿನ ಅನ್ವಯ ಸಂತ್ರಸ್ತೆ ನೇರವಾಗಿ ದೂರು ನೀಡದೇ ಹೋದರೆ ಮೂರನೇ ವ್ಯಕ್ತಿ ದೂರು ನೀಡಿದಾಗ ಪೂರ್ವಭಾವಿ ತನಿಖೆ ನಡೆಸಲು 15 ದಿನಗಳ ಕಾಲಾವಕಾಶ ಇದೆ.

→5

10

# ಸಿಡಿ ಉಸ್ತುವಾರಿ ತನಿಖೆಗೆ ಪಟ್ಟು

23/3/21

(ಒಂದನೇ ಪುಟದಿಂದ)

ಆದ್ಯಾದ ಬಳಿಕ ಖಚಿತಪಡಿಸಿಕೊಂಡು ಎಫ್‌ಐಆರ್ ದಾಖಲಿಸಬಹುದು. ಹೀಗಾಗಿ ಈ ಪ್ರಕರಣದಲ್ಲಿ ಖಚಿತತೆ ಇಲ್ಲದ ಕಾರಣಕ್ಕಾಗಿ ಎಫ್‌ಐಆರ್ ದಾಖಲಾಗಿಲ್ಲ. ದೂರುದಾರ ದೂರು ವಾಪಸ್ ಪಡೆದಿದ್ದರೂ ಕೂಡ ಸಂತ್ರಸ್ತೆಯ ದೃಷ್ಟಿಕೋನದಿಂದಲೂ ತನಿಖೆ ನಡೆಸಲಾಗುತ್ತಿದೆ. ಮಾಜಿ ಸಚಿವ ಜಾರಕಿಹೊಳಿ ನೀಡಿದ ದೂರು ಮತ್ತು ಸಂತ್ರಸ್ತೆಯ ಪಾಲಕರು ನೀಡಿದ ದೂರುಗಳ ಬಗೆಗೂ ತನಿಖೆ ನಡೆದಿದೆ ಎಂದು ಸಚಿವ ಬೊಮ್ಮಾಯಿ ವಿವರಿಸಿದರು.

ಪ್ರತಿಪಕ್ಷಗಳು ಆರೋಪಿಸುತ್ತಿರುವಂತೆ ಎಸ್‌ಐಟಿ ಕೇವಲ ಮಾಜಿ ಸಚಿವರ ದೂರನ್ನು ಮಾತ್ರ ತನಿಖೆ ಮಾಡುತ್ತಿಲ್ಲ. ಈಗಾಗಲೇ ದಿನೇಶ್ ಕಲ್ಲಹಳ್ಳಿ ನೀಡಿದ ದೂರಿನ ಆಧಾರದ ಮೇಲೂ ಮಾಜಿ ಸಚಿವರಿಗೆ ಎರಡು ಬಾರಿ ಸಮನ್ಸ್ ನೀಡಿ, ವಿಚಾರಣೆ ನಡೆಸಲಾಗಿದೆ. ಮತ್ತೊಂದೆಡೆ ಯುವತಿಯ ವಿಡಿಯೋ ಹೇಳಿಕೆ ಆಧಾರದ ಮೇಲೆ ಆಕೆ ಮತ್ತು ಆಕೆಯ ಕುಟುಂಬಕ್ಕೆ ಭದ್ರತೆ ನೀಡಲು ಸೂಚಿಸಲಾಗಿದೆ. ಸಂತ್ರಸ್ತೆ ಹೇಳಿಕೆ ನೀಡಿದರೆ ಅವಳು ಇದ್ದಲ್ಲಿಗೆ ಹೋಗಿ ಮಹಿಳಾ ವೇದಿಗಳ ಸಹಾಯದಿಂದ ಹೇಳಿಕೆ ದಾಖಲಿಸಿಕೊಳ್ಳುವುದಾಗಿ ಎಸ್‌ಐಟಿ ತಿಳಿಸಿದರೂ ಆಕೆ ಹೇಳಿಕೆ ನೀಡಲು ಮುಂದೆ ಬರುತ್ತಿಲ್ಲ. ದೆಹಲಿ, ಭೋಪಾಲ್, ಗೋವಾ, ಬೆಳಗಾವಿ ಮತ್ತಿತರೆಡೆ ಆಕೆ ಇರುವ ಮಾಹಿತಿ ಸಿಕ್ಕಿತ್ತು. ಆದರೆ ಆಕೆ ಎಸ್‌ಐಟಿ ಕೈಗೆ ಸಿಗುತ್ತಿಲ್ಲ. ಆಕೆ ಒಂದು ವೇಳೆ ಹೇಳಿಕೆ ನೀಡಿ, ತನ್ನ ಮೇಲೆ ಲೈಂಗಿಕ ದೌರ್ಜನ್ಯ ನಡೆದಿದೆ ಎಂದು ಹೇಳಿಕೆ ನೀಡಿದರೆ ಐಪಿಸಿ ಸೆಕ್ಷನ್ 376ರ ಅನ್ವಯ ಮಾಜಿ ಸಚಿವರ ಮೇಲೆ ಪ್ರಕರಣ ದಾಖಲಿಸಲಾಗುವುದು ಎಂದು ಭರವಸೆ ನೀಡಿದರು.

ಸಿಡಿ ಹಗರಣದಲ್ಲಿ ಈಗಾಗಲೇ ಆರು ಸ್ಥಳಗಳಲ್ಲಿ ದಾಳಿ ನಡೆಸಿ 11 ಜನರ ಹೇಳಿಕೆ ದಾಖಲಿಸಿಕೊಳ್ಳಲಾಗಿದೆ. ಬ್ಯಾಂಕ್ ವ್ಯವಹಾರಗಳನ್ನು ಕೂಡ ಪತ್ತೆ ಮಾಡಲಾಗಿದೆ. ಐದು ತಂಡಗಳಲ್ಲಿ 22 ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ. ಹೀಗಾಗಿ ಎಸ್‌ಐಟಿ ಮೇಲೆ ಪ್ರತಿಪಕ್ಷಗಳು ಸಂಶಯ ವ್ಯಕ್ತಪಡಿಸುವುದು ಬೇಡ. ಈ ಪ್ರಕರಣದಲ್ಲಿ ಶೇಕಡಾ ನೂರರಷ್ಟು ವಿಶ್ವಾಸವಿದೆ, ನಾವು ಆ ಯುವತಿಯನ್ನು ಪತ್ತೆ ಮಾಡುತ್ತೇವೆ ಮತ್ತು ಆಕೆಯ ಹೇಳಿಕೆ ಪಡೆಯುತ್ತೇವೆ. ಯಾವುದೇ ಪ್ರಭಾವಿಗಳನ್ನು ರಕ್ಷಿಸುವ ಅಥವಾ ಯಾವುದೇ ಅಮಾಯಕರಿಗೆ ಅನ್ಯಾಯ ಮಾಡುವ ಪ್ರಶ್ನೆಯೇ ಇಲ್ಲ ಎಂದು ತಿಳಿಸಿದರು.

ಆದರೆ ಸರ್ಕಾರದ ಉತ್ತರಕ್ಕೆ ಅಸಮಾಧಾನ ವ್ಯಕ್ತಪಡಿಸಿದ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಅವರು, ಮಾಜಿ ಸಚಿವರು ಬೇರೊಬ್ಬರ ಮೂಲಕ ನೀಡಿದ ದೂರಿನ ಮೇಲೆ ಎಫ್‌ಐಆರ್ ದಾಖಲಿಸಿದ್ದೀರಿ. ಆದರೆ ಯುವತಿಯೇ ವಿಡಿಯೋ ಮೂಲಕ ಹೇಳಿಕೆ ನೀಡಿದ್ದರೂ ಮಾಜಿ ಸಚಿವರ ವಿರುದ್ಧ ಅತ್ಯಾಚಾರ ಪ್ರಕರಣ ದಾಖಲಿಸಲಿಲ್ಲ. ಈ ಪ್ರಕರಣದಲ್ಲಿ ನಿರ್ಭಯಾ ಕಾಯ್ದೆಯ ಸ್ಪಷ್ಟ ಉಲ್ಲಂಘನೆಯಾಗಿದೆ. ಹೀಗಾಗಿ ಎಸ್‌ಐಟಿ ಬದಲಾಗಿ ಹೈಕೋರ್ಟ್ ಮುಖ್ಯ ನ್ಯಾಯಾಧೀಶರ ಮೇಲ್ವಿಚಾರಣೆಯಲ್ಲೇ ತನಿಖೆ ನಡೆಸಬೇಕು ಹಾಗೂ ತಮ್ಮ ವಿರುದ್ಧ ಸುದ್ದಿ ಬಿತ್ತರ ಮಾಡಬಾರದೆಂದು ತಡೆಯಾಜ್ಞೆ ತಂದಿರುವ ಆರು ಮಂದಿ ಸಚಿವರು ರಾಜಿನಾಮೆ ನೀಡಬೇಕೆಂದು ಪಟ್ಟು ಹಿಡಿದರು. ಆದರೆ ಸರ್ಕಾರ ಇದಕ್ಕೆ ಮಣಿಯಲಿಲ್ಲ.

ಆಗ ಸಿದ್ದರಾಮಯ್ಯ ನೇತೃತ್ವದಲ್ಲಿ ಪ್ರತಿಪಕ್ಷಗಳ ಸದಸ್ಯರು ಸದನದ ಬಾವಿಗೆ ಇಳಿದು ಪ್ರತಿಭಟನೆ ನಡೆಸಿದರು.

ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಸದನವನ್ನು ಮಂಗಳವಾರ ಬೆಳಗ್ಗೆ 11ಕ್ಕೆ ಮುಂದೂಡಿದರು.